# ಕರ್ನಾಟಕ ಲೋಕಾಯುಕ್ತ

**ನಂ.ಕಂಪ್ಲೆಂಟ್/ಉಪಲೋಕ್/ಬಿಡಿ-748/2016/ಡಿಆರ್‌ಇ-1**

ಬಹುಮಹಡಿಗಳ ಕಟ್ಟಡ,
ಡಾ:ಅಂಬೇಡ್ಕರ್ ವೀದಿ,
ಬೆಂಗಳೂರು.
ದಿನಾಂಕ : 03/02/2017

## ಕರ್ನಾಟಕ ಲೋಕಾಯುಕ್ತ ಕಾಯಿದೆ, 1984 ರ ಕಲಂ 12(1) ರನ್ವಯ ವರದಿ

ವಿಷಯ: ಶ್ರೀ.ಟಿ.ಸಿದ್ದೇಶಪ್ಪ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತಿ, ಯರಗನಾಳು, ಪ್ರಧಾನ ಕಚೇರಿ ರಾಮೇಶ್ವರ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, ಇವರ ವಿರುದ್ಧ ಸಲ್ಲಿಸಿದ ದೂರಿನ ಸಂಬಂಧ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿನ ವರದಿ.

******

1) ಶ್ರೀ.ಹೆಚ್.ಮಲ್ಲಪ್ಪ ಬಿನ್ ಹೆಚ್.ಸಿದ್ದಪ್ಪ, ಯರಗನಾಳು ಗ್ರಾಮ ಮತ್ತು ಅಂಚೆ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ರವರು ಸರ್ಕಾರಿ/ಸಾರ್ವಜನಿಕ ನೌಕರರಾದ ಶ್ರೀ.ಟಿ.ಸಿದ್ದೇಶಪ್ಪ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತಿ, ಯರಗನಾಳು, ಪ್ರಧಾನ ಕಚೇರಿ ರಾಮೇಶ್ವರ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2) ಈ ಪ್ರಕರಣದಲ್ಲಿ ದೂರುದಾರರು 2014-15ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಅತಿವೃಷ್ಟಿಯಿಂದ ರೈತರು ಬೆಳೆದ ಬೆಳೆ ಹಾನಿಯಾಗಿದ್ದು, ತಹಶೀಲ್ದಾರ್, ಸಹಾಯಕ ಕೃಷಿ ನಿರ್ದೇಶಕರು ಮತ್ತು ಹಿರಿಯ ತೋಟಗಾರಿಕಾ ಸಹಾಯಕ ನಿರ್ದೇಶಕರು, ಹೊನ್ನಾಳಿ, ಇವರು ಗ್ರಾಮಗಳ ರೈತರಿಗೆ ಚೆಕ್ ಮೂಲಕ ಪರಿಹಾರದ ಹಣವನ್ನು ವಿತರಿಸಲು ಬಿಡುಗಡೆ ಮಾಡಿದ್ದು, ಎದುರುದಾರರು ಪರಿಹಾರದ ಹಣ ಹಂಚುವಲ್ಲಿ ರೈತರ ನಕಲಿ ಸಹಿ ಮಾಡಿ ಹಣವನ್ನು ದುರ್ಬಳಕೆ ಮಾಡಿರುತ್ತಾರೆಂದು ಆಪಾದಿಸಿ ದೂರನ್ನು ಸಲ್ಲಿಸಿರುತ್ತಾರೆ.

3) ದೂರುದಾರರ ದೂರಿನ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ದಾವಣಗೆರೆ ಇವರಿಗೆ ಆದೇಶಿಸಲಾಗಿತ್ತು. ಜಿಲ್ಲಾಧಿಕಾರಿಯವರು ತಹಶೀಲ್ದಾರ್, ಹೊನ್ನಾಳಿ ತಾಲ್ಲೂಕು ಇವರಿಗೆ ಬರೆದ ಪತ್ರದ ಆಧಾರದಲ್ಲಿ ತಹಶೀಲ್ದಾರ್‌ರವರು ವಿಚಾರಣೆ ನಡೆಸಿ ವರದಿಯನ್ನು ಸಲ್ಲಿಸಿರುತ್ತಾರೆ. ತಹಶೀಲ್ದಾರ್‌ರವರು ತಮ್ಮ ವರದಿಯಲ್ಲಿ ಅತಿವೃಷ್ಟಿಯಿಂದ ಈರುಳ್ಳಿ ಬೆಳೆ ಹಾನಿಯಾದ ಬಗ್ಗೆ ರೈತರಿಗೆ ಪರಿಹಾರ ಧನ ನೀಡುವ ಕುರಿತಂತೆ ರೂ.19,38,620/- ಅನುದಾನ

ಬಿಡುಗಡೆಯಾಗಿದ್ದು, ನಗದು ರೂಪದಲ್ಲಿ ಫಲಾನುಭವಿಗಳಿಗೆ ವಿತರಿಸಲಾಗಿರುವುದಾಗಿ ಶ್ರೀ.ಟಿ.ಸಿದ್ದೇಶಪ್ಪ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ, ಯರಗನಾಳ್, ಇವರು ತಿಳಿಸಿರುತ್ತಾರೆ. ಶ್ರೀ.ದೊಡ್ಡಬಸಪ್ಪ ಬಿನ್ ಸಿದ್ದಲಿಂಗಪ್ಪ ಇವರ ಮಗನಾದ ಸಿದ್ದೇಶಪ್ಪ ಇವರು ಹೇಳಿಕೆ ನೀಡಿರುವಂತೆ ಅವರ ತಂದೆಯವರು ದಿ.15/2/13 ರಂದು ಮರಣ ಹೊಂದಿದ್ದು, ಸೊಸೈಟಿಯಿಂದ 2014-15ನೇ ಸಾಲಿನಲ್ಲಿ ಈರುಳ್ಳಿ ಹಣ ಬಿಡುಡೆಯಾಗಿದ್ದು, ಸದರಿ ಹಣವನ್ನು ಅವರ ತಂದೆಯ ಸಹಿಯನ್ನು ನಕಲಿ ಸಹಿ ಮಾಡಿ ಪಡೆದಿರುತ್ತಾರೆಂದು ಹೇಳಿಕೆಯಲ್ಲಿ ತಿಳಿಸಿರುತ್ತಾರೆ. ದೂರುದಾರರು ನೀಡಿರುವ ಪಟ್ಟಿಯಲ್ಲಿ ವಿವರಿಸಿರುವಂತೆ ಎಲ್ಲಾ ಫಲಾನುಭವಿಗಳಿಗೆ ತಿಳುವಳಿಕೆಯನ್ನು ನೀಡಿ ಹೇಳಿಕೆಯನ್ನು ಪಡೆಯಲಾಗಿರುತ್ತದೆ ಹಾಗೂ ಸದರಿ ಗ್ರಾಮದ ವಾಸಿ ದೊಡ್ಡಪ್ಪ ಬಿನ್ ಸಿದ್ದಲಿಂಗಪ್ಪ ಇವರಿಗೆ ನೀಡಲಾಗಿರುವ ರೂ.1,000/- ಮಾತ್ರ ದುರುಪಯೋಗವಾಗಿರುವುದು ಕಂಡುಬರುತ್ತದೆಯೆಂದು ತಹಶೀಲ್ದಾರ್‌ರವರು ತನ್ನ ವರದಿಯಲ್ಲಿ ತಿಳಿಸಿರುತ್ತಾರೆ.

4) ತಹಶೀಲ್ದಾರ್‌ರವರ ವರದಿಯ ಮೇಲೆ ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿದ್ದು, ಆಕ್ಷೇಪಣೆಯಲ್ಲಿ ಶ್ರೀ.ದೊಡ್ಡಬಸಪ್ಪ ಬಿನ್ ಸಿದ್ದಲಿಂಗಪ್ಪ ಇವರಿಗೆ ಪರಿಹಾರ ಮೊತ್ತ ರೂ.1,000/- ಮಂಜೂರಾತಿಯಾಗಿರುತ್ತದೆ. ಸದರಿಯವರು ಯರಗನಾಳು ಗ್ರಾಮದಲ್ಲಿ ಇರುವುದಿಲ್ಲ ಮತ್ತು ಸದರಿ ಮೊತ್ತವನ್ನು ಅವರು ಪಡೆಯದಿರುವುದರಿಂದ ಸರ್ಕಾರಕ್ಕೆ ವಾಪಸ್ ಕಳುಹಿಸಲಾಗಿರುತ್ತದೆ ಹಾಗೂ ಯಾವುದೇ ಹಣ ದುರುಪಯೋಗ ಆಗಿರುವುದಿಲ್ಲವೆಂದು ತಿಳಿಸಿರುತ್ತಾರೆ.

5) ತಹಶೀಲ್ದಾರ್, ಹೊನ್ನಾಳಿ ತಾಲ್ಲೂಕು ಇವರ ವರದಿಯನ್ನು ಪರಿಶೀಲಿಸಿದಾಗ, ಫಲಾನುಭವಿಗಳಿಗೆ ನಗದು ರೂಪದಲ್ಲಿ ಸಹಾಯಧನವನ್ನು ವಿತರಣೆ ಮಾಡಲಾಗಿದೆಯೆಂದು ಹೇಳಿರುವ ಅಂಶವನ್ನು ಗಮನಿಸಿದಾಗ, ನಗದು ರೂಪದಲ್ಲಿ ಯಾವ ನಿಯಮದಡಿ ಸಹಾಯದನವನ್ನು ನೀಡಿರುತ್ತಾರೆನ್ನುವುದಕ್ಕೆ ಯಾವುದೇ ವಿವರಣೆಯಿಲ್ಲ. ಚೆಕ್ ಮೂಲಕ ನೀಡಬೇಕಾಗಿರುವ ಸಹಾಯದನವನ್ನು ನಗದು ಮೂಲಕ ನೀಡಿರುವುದು ಅನುಮಾನಕ್ಕೆ ಎಡೆಮಾಡಿಕೊಡುತ್ತದೆ. ದೊಡ್ಡಪ್ಪ ಬಿನ್ ಸಿದ್ದಲಿಂಗಪ್ಪ ಇವರಿಗೆ ಮಂಜೂರಾಗಿರುವ ರೂ.1,000/- ದುರುಪಯೋಗವಾಗಿದೆ ಎಂದು ತಹಶೀಲ್ದಾರ್‌ರವರು ವರದಿಯಲ್ಲಿ ತಿಳಿಸಿದ್ದು, ಆದರೆ ಸದರಿ ಹಣವನ್ನು ದೊಡ್ಡಸಿದ್ದಪ್ಪರವರು ಪಡೆಯದಿರುವ ಕಾರಣ ಸರ್ಕಾರಕ್ಕೆ ವಾಪಸ್ ಕಳುಹಿಸಲಾಗಿದೆಯೆಂದು ಎದುರುದಾರರು ಹೇಳಿದ್ದು, ಚೆಕ್‌ನ ಪ್ರತಿಯನ್ನು ಹಾಜರು ಪಡಿಸಿರುತ್ತಾರೆ. ಚೆಕ್‌ನ ಪ್ರತಿಯನ್ನು ಪರಿಶೀಲಿಸಿದಾಗ, ಸದರಿ ಮೊತ್ತ ಯಾವ ವಿಚಾರಕ್ಕೆ ಸಂಬಂಧಪಟ್ಟ ಮೊತ್ತ ಎಂಬುದನ್ನು ಗ್ರಹಿಸಲು ಸಾಧ್ಯವಿಲ್ಲ. ಕಡತವನ್ನು ಪರಿಶೀಲಿಸಿದಾಗ, ಹಣ ದುರುಪಯೋಗವಾಗಿರುವುದು ಕಂಡುಬರುತ್ತದೆ. ಆದ್ದರಿಂದ, ಮೇಲ್ನೋಟಕ್ಕೆ ಎದುರುದಾರರು ಕರ್ತವ್ಯಲೋಪ ಮತ್ತು ಅಧಿಕಾರ ದುರುಪಯೋಗ ಪಡಿಸಿಕೊಂಡಿರುವುದು ಕಂಡುಬರುತ್ತದೆ.

6) ಮೇಲ್ಕಂಡ ಹಿನ್ನೆಲೆಯಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ, 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಕ್ಷಮ ಪ್ರಾಧಿಕಾರಕ್ಕೆ ಬೆಳೆ ಹಾನಿಗೆ ನೀಡಬೇಕಾಗಿದ್ದ ಪರಿಹಾರ ಹಣ ವಿತರಣೆಯಲ್ಲಿ ಅವ್ಯವಹಾರವಾಗಿರುವುದು ಕಂಡುಬರುತ್ತಿರುವುದರಿಂದ, ಎಷ್ಟು ಮೊತ್ತದ ಹಣ ದುರುಪಯೋಗವಾಗಿದೆಯೆನ್ನುವುದನ್ನು ಪರಿಶೀಲಿಸಿ ಹಣವನ್ನು ವಸೂಲಾತಿ ಮಾಡಲು ಈ ಮೂಲಕ ಶಿಫಾರಸ್ಸು ಮಾಡಲಾಗಿರುತ್ತದೆ. ತದನಂತರ ಸಕ್ಷಮ ಪ್ರಾಧಿಕಾರವು ಈ ಸಂಸ್ಥೆಗೆ ಅಲ್ಲಿಂದ **ಒಂದು ತಿಂಗಳೊಳಗೆ** ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(2) ರಡಿಯಲ್ಲಿ ಕೈಗೊಳ್ಳಲಾದ ಕ್ರಮದ ಬಗ್ಗೆ ವರದಿ ಸಲ್ಲಿಸುವುದು.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

3/2/17.

(ನ್ಯಾಯಮೂರ್ತಿ ಸುಭಾಷ್ ಬಿ. ಆಡಿ)
**ಉಪಲೋಕಾಯುಕ್ತರು-2,**
**ಕರ್ನಾಟಕ ರಾಜ್ಯ, ಬೆಂಗಳೂರು.**